Azadi Ka Amrit Mahotsav
ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ,
ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ: ಸಿ3(7) ಪ್ರಾಶಾಶಿ ಶಿ.ನಿಯೋಜನೆ-01/2023-24 ದಿನಾಂಕ: 27/06/2022

: ಅಧಿಕೃತ ಜ್ಞಾಪನ:

ವಿಷಯ: ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ನಿಯೋಜನೆಯನ್ನು ರದ್ದುಪಡಿಸುವ ಬಗ್ಗೆ:

---****---

ವಿಷಯಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಉಪನಿರ್ದೇಶಕರುಗಳು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು ಮಕ್ಕಳ ಶೈಕ್ಷಣಿಕ ಹಿತಾಸಕ್ತಿಯನ್ನು ಗಮನದಲ್ಲಿರಿಸದೇ ನಿಯಮಬಾಹಿರವಾಗಿ ಶಿಕ್ಷಕರುಗಳನ್ನು ನಿಯಮಗಳನ್ನು ಉಲ್ಲಂಘಿಸಿ ನಿಯೋಜನೆ ಮಾಡಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆ/ತಾಲ್ಲೂಕುಗಳಲ್ಲಿ ನಿಯೋಜನೆಯ ಮೇಲೆ ಕಛೇರಿ/ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹಶಿಕ್ಷಕರ ನಿಯೋಜನೆಯನ್ನು ಆಯಾ ಶೈಕ್ಷಣಿಕ ವರ್ಷಾಂತ್ಯಕ್ಕೆ ರದ್ದುಪಡಿಸಲು ಸೂಚಿಸಲಾಗಿತ್ತು. ಆದರೆ ಇದುವರೆಗೂ ನಿಯೋಜನೆಯ ಮೇಲೆ ಸದರಿ ಶಿಕ್ಷಕರುಗಳು ಮುಂದುವರೆಯುತ್ತಿರುವುದು ವಿಷಾಧನೀಯ. ಇಲಾಖೆಯಿಂದ ಸ್ಪಷ್ಟ ಸೂಚನೆಗಳು ಇದ್ದಾಗ್ಯೂ ಸಹಾ ಕೆಲವು ಶಿಕ್ಷಕರನ್ನು ಅದೇ ಶಾಲೆಯಲ್ಲಿ ನಿಯಮಬಾಹಿರವಾಗಿ ಮುಂದುವರೆಯಲು ಅವಕಾಶ ನೀಡುವುದರ ಮೂಲಕ ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳು ಮೇಲಾಧಿಕಾರಿಗಳ ಆದೇಶವನ್ನು ಪಾಲಿಸುವಲ್ಲಿ ವಿಫಲರಾಗಿರುವ ಅಂಶವನ್ನು ಬಹಳ ಗಂಭೀರವಾಗಿ ಪರಿಗಣಿಸಿದೆ.

ಒಂದು ವೇಳೆ ಸರ್ಕಾರದಿಂದ ಆದೇಶವಾಗಿರುವ ಪ್ರಕರಣಗಳನ್ನು ಹೊರತುಪಡಿಸಿ ಉಳಿದಂತೆ ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಆದೇಶಿಸಲಾಗಿದೆ. ಈ ಹಿನ್ನೆಲೆಯಲ್ಲಿ ಅಂತಹ ಶಿಕ್ಷಕರುಗಳನ್ನು ಕೂಡಲೆ ಶಾಲಾ ಕರ್ತವ್ಯದಿಂದ ಬಿಡುಗಡೆಗೊಳಿಸತಕ್ಕದ್ದು ಹಾಗೂ ಬಿಡುಗಡೆಗೊಂಡ ಶಿಕ್ಷಕರು ತಕ್ಷಣ ಮೂಲ ಶಾಲೆಯಲ್ಲಿ ಕಡ್ಡಾಯವಾಗಿ ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಒಂದು ವೇಳೆ ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ಹಾಜರಾಗದಿದ್ದಲ್ಲಿ ಅಂತಹ ಶಿಕ್ಷಕರನ್ನು ಅನಧಿಕೃತ ಗೈರು ಹಾಜರಿ ಪ್ರಕರಣ ಎಂದು ಪರಿಗಣಿಸಿ ಶಿಸ್ತು ಕ್ರಮ ಜರುಗಿಸಲು ತಿಳಿಸಿದೆ ಹಾಗೂ ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ಹಾಜರಾಗದ ಶಿಕ್ಷಕರ ವೇತನವನ್ನು ಪಾವತಿಸದೇ ತಡೆಹಿಡಿಯಲು ಸೂಚಿಸಿದೆ. ನಿಯೋಜನೆ ಆದೇಶವಾಗಿರುವ ಶಿಕ್ಷಕರ ಅಗತ್ಯತೆ ಇಲ್ಲದಿದ್ದಲ್ಲಿ ಅಥವಾ ಮೂಲ ಶಾಲೆಯಲ್ಲಿ ಪಿ.ಟಿ.ಆರ್ ಗೆ ಅನುಗುಣವಾಗಿ ಸದರಿ ಶಿಕ್ಷಕರ ಅಗತ್ಯತೆ ಇದ್ದಲ್ಲಿ ಅಂತಹಾ ಶಿಕ್ಷಕರ ನಿಯೋಜನೆ ರದ್ದುಪಡಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ತಿಳಿಸಿದೆ. ಯಾವುದೇ ನಿಯೋಜನೆಯು ಶೈಕ್ಷಣಿಕ ಹಿತಾಸಕ್ತಿಗೆ ಪೂರಕವಾಗಿರಬೇಕೇ ಹೊರತು ಶಿಕ್ಷಕರ ವಯಕ್ತಿಕ ಹಿತಾಸಕ್ತಿಯಿಂದ ಮಾಡತಕ್ಕದ್ದಲ್ಲ.

ಈಗಾಗಲೇ ಶಿಕ್ಷಕರನ್ನು ಬಿಡುಗಡೆಗೊಳಿಸಲಾಗಿರುವ ಹಾಗೂ ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ಹಾಜರಾಗಿರುವ ಶಿಕ್ಷಕರ ಜಿಲ್ಲಾವಾರು ಪಟ್ಟಿಯನ್ನು ನಮೂನೆಯಲ್ಲಿರುವಂತೆ ದಿನಾಂಕ: 05/07/2023ರ ಒಳಗಾಗಿ ಈ ಕಛೇರಿಗೆ ಕಳುಹಿಸಲು ತಿಳಿಸಿದೆ. ಆದೇಶವನ್ನು ಮೀರಿ ಯಾವುದೇ ಶಿಕ್ಷಕರು ನಿಯೋಜನೆಯ ಮೇಲೆ ಮುಂದುವರೆದಿರುವ ಪ್ರಕರಣ ಕಂಡುಬಂದಲ್ಲಿ ಅಂತಹ ಉಪನಿರ್ದೇಶಕರು(ಆಡಳಿತ) ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಸಂಬಂಧಿಸಿದ ಸಿಬ್ಬಂಧಿಗಳ ವಿರುದ್ಧ ಕರ್ತವ್ಯ ನಿರ್ಲಕ್ಷತೆ ಎಂದು ಪರಿಗಣಿಸಿ ಶಿಸ್ತು ಕ್ರಮ ಜರುಗಿಸಲಾಗುವುದು.

R. ~

ಡಾ॥ ವಿಶಾಲ್. ಆರ್ ಭಾ.ಆ.ಸೇ.
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು.

ಗೆ.

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಇವರುಗಳಿಗೆ ತುರ್ತು ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ಇವರಿಗೆ ಉಪನಿರ್ದೇಶಕರ ಮೂಲಕ.

ಪ್ರತಿಯನ್ನು ಮಾಹಿತಿಗಾಗಿ:

1. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ. ಧಾರವಾಡ ಮತ್ತು ಕಲ್ಬುರ್ಗಿ ಇವರಿಗೆ ಅಗತ್ಯ ಕ್ರಮಕ್ಕಾಗಿ
2. ಜಂಟಿ ನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು.
3. ರಾಜ್ಯದ ವಿಭಾಗೀಯ ಸಹನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಬೆಳಗಾವಿ ಕಲ್ಬುರ್ಗಿ ವಿಭಾಗ ಇವರುಗಳಿಗೆ.

ನಮೂನೆ

**ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ನಿಯೋಜನೆಯ ತಃಖ್ತೆ**

1. ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ವಿವರ

ಜಿಲ್ಲೆ,

| ಕ್ರ.ಸಂ | ನಿಯೋಜನೆಯ ಮೇಲಿರುವ ಶಿಕ್ಷಕರ ಹೆಸರು ಮತ್ತು ಮೂಲ ಶಾಲೆಯ ವಿವರ. | ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಶಾಲೆ. | ನಿಯೋಜನೆಯ ಆದೇಶ ಸಂಖ್ಯೆ ಮತ್ತು ದಿನಾಂಕ | ನಿಯೋಜಿತ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ದಿನಾಂಕ | ಪ್ರಸ್ತುತ ಬಿಡುಗಡೆಗೊಳಿಸಿದ ದಿನಾಂಕ | ಷರಾ |
|---|---|---|---|---|---|---|
| | | | | | | |
| | | | | | | |
| | | | | | | |

2. ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ವಿವರ

ಜಿಲ್ಲೆ:

| ಕ್ರ.ಸಂ | ನಿಯೋಜನೆಯ ಮೇಲಿರುವ ಶಿಕ್ಷಕರ ಹೆಸರು ಮತ್ತು ಮೂಲ ಶಾಲೆಯ ವಿವರ. | ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಶಾಲೆ. ತಾಲ್ಲೂಕು/ಜಿಲ್ಲೆ | ಬಿಡುಗಡೆ ಆದೇಶ ಸಂಖ್ಯೆ ದಿನಾಂಕ | ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕ | ಷರಾ |
|---|---|---|---|---|---|
| | | | | | |
| | | | | | |
| | | | | | |

ಉಪನಿರ್ದೇಶಕರ ಸಹಿ
ಮತ್ತು ಮೊಹರು

ಸೂಚನೆ: ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಪ್ರತ್ಯೇಕ ನಮೂನೆಯಲ್ಲಿ ಮಾಹಿತಿ ಸಲ್ಲಿಸಿರುವುದು.